# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 74 | Pages. 2 | Date: 18-02-2026, WEDNESDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 74 - ಪುಟಗಳು : 2 | 18-02-2026 | ಬುಧವಾರ | Ph: 8762954248 | ದರ : ₹1


## ಬಾಲ್ಯ ವಿವಾಹ ಸಮಾಜಕ್ಕಂಟಿದ ದೊಡ್ಡ ಪಿಡುಗು

### ಜಿಪಂ ಸಿಇಓ ಪೂರ್ಣಿಮಾ ಅಭಿಮತ | ಅಧಿಕಾರಿಗಳಿಗೆ ಅರಿವು ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳು ಸಮಾಜಕ್ಕೆ ಅಂಟಿದ ದೊಡ್ಡ ಪಿಡುಗು. ಅದರ ವಿರುದ್ಧ ಎಲ್ಲರೂ ಒಟ್ಟಾಗಿ ಹೋರಾಡಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಬಿ.ಆರ್.ಪೂರ್ಣಿಮಾ ಹೇಳಿದರು.




ನಗರದ ಡಾ. ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಮಂಗಳವಾರ ಏರ್ಪಡಿಸಿದ್ದ ಬಾಲ್ಯ ವಿವಾಹ ಮುಕ್ತ ಹಾಸನ-ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಅರಿವು ಮತ್ತು ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಕಾನೂನು ಎಷ್ಟೇ ಬಿಗಿಯಾದರೂ ಗ್ರಾಮೀಣ ಭಾಗದಲ್ಲಿ ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗುತ್ತಲೇ ಇರುವುದು ಆತಂಕದ ಸಂಗತಿಯಾಗಿದ್ದು, ಸಂಬಂಧಪಟ್ಟ ಅಧಿಕಾರಿಗಳು ಅನಿಷ್ಟ ಪದ್ಧತಿ ತಡೆಗೆ ಕಂಕಣಬದ್ಧರಾಗಿ ಕೆಲಸ ಮಾಡಬೇಕು. ವಿದ್ಯಾವಂತರೇ ತಪ್ಪು ಮಾಡುತ್ತಿರುವುದು ದುರಂತ. ಮನೆಯಲ್ಲಿ ಪೋಷಕರು ಹಾಗೂ ಶಾಲೆಯಲ್ಲಿ ಶಿಕ್ಷಕರು ಈ ಬಗ್ಗೆ ಎಚ್ಚರ ವಹಿಸಬೇಕು. ಹೆಣ್ಣು ಮಕ್ಕಳಿಗೆ ಸ್ವಯಂ ರಕ್ಷಣೆಯ ಜಾಗೃತಿ ಮೂಡಿಸಬೇಕು. ಬಾಲ್ಯ ವಿವಾಹವಾದರೆ ಒಂದು ಹೆಣ್ಣಿನ ಬಾಳನ್ನು ನಾಶ ಮಾಡಿದಂತಾಗುತ್ತದೆ. ವಿದ್ಯಾಭ್ಯಾಸ, ಆಟೋಟಗಳ ಮೂಲಕ ಇನ್ನೂ ಬೆಳೆಯುವ ಹಂತದಲ್ಲಿರುವ ಮಕ್ಕಳಿಗೆ ಮದುವೆಯಂತಹ ದೊಡ್ಡ ಭಾರ ಹೊರಿಸುವುದು ಅಕ್ಷಮ್ಯ ಎಂದರು.

ಇತ್ತೀಚಿನ ದಿನಗಳಲ್ಲಿ ಬಾಲ್ಯ ವಿವಾಹ ಹಾಗು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣ ಹೆಚ್ಚುತ್ತಿರುವುದು ಆತಂಕ ಹುಟ್ಟಿಸಿದೆ. ಗ್ರಾಮ ಮಟ್ಟದಲ್ಲೇ ಜಾಗೃತಿ ಮೂಡಿಸುವ ಜವಾಬ್ದಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಮೇಲಿದೆಯೆಂದರು.

ಶಾಲೆ, ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮ, ಗ್ರಾಮಸಭೆ, ಮಕ್ಕಳ ಗ್ರಾಮಸಭೆ ಹಾಗೂ ಸಂವಾದ ಕಾರ್ಯಕ್ರಮಗಳನ್ನು ಹೆಚ್ಚಿಸಬೇಕು. ಬಾಲ್ಯ ವಿವಾಹ ನಿಷೇಧ ಕಾಯ್ದೆ, ಬಾಲ ನ್ಯಾಯ ಕಾಯ್ದೆ, ಮಕ್ಕಳ ಹಕ್ಕುಗಳು ಮತ್ತು ಪೋಕ್ಸೋ ಕಾನೂನು ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕೆಂದರು.

ಹದಿಹರೆಯದ ವಯಸ್ಸಿನಲ್ಲಿ ಯುವಕ ಹಾಗೂ ಯುವತಿಯರು ಆಕರ್ಷಣೆಗೆ ಒಳಗಾಗಿ ಪ್ರೀತಿಯ ಹೆಸರಿನಲ್ಲಿ ಜೀವನ ಹಾಳು ಮಾಡಿಕೊಳ್ಳುತ್ತಾರೆ. ಓದುವ ಸಮಯದಲ್ಲಿ ಬೇಡದ ವಿಚಾರಕ್ಕೆ ಹೆಚ್ಚಿನ ಆದ್ಯತೆ ನೀಡಿ ಭವಿಷ್ಯವನ್ನೇ ಡೋಲಾಯಮಾನ ಮಾಡಿಕೊಳ್ಳುತ್ತಾರೆ. ಲೈಂಗಿಕ ದೌರ್ಜನ್ಯ ಪ್ರಕರಣಗಳು ಹೆಚ್ಚಿನ ಸಂಖ್ಯೆಯಲ್ಲಿ ವರದಿಯಾಗುತ್ತಿರುವುದು ಕಳವಳಕಾರಿ ಸಂಗತಿ ಎಂದರು.

ಕಾನೂನು ಅರಿವಿಲ್ಲದೆ ಪ್ರೀತಿ, ಪ್ರೇಮದ ಹೆಸರಿನಲ್ಲಿ ಮನೆ ಬಿಟ್ಟು ಹೋಗುವುದು, ದೈಹಿಕ ಸಂಪರ್ಕ ಹೊಂದುವುದು ಮುಂತಾದ ಘಟನೆಗಳು ನಡೆಯುತ್ತಿವೆ. ಅದರಿಂದ ಬಾಲ್ಯ ವಿವಾಹ, ಪೋಕ್ಸೋ ಪ್ರಕರಣ ಹಾಗು ಬಾಲ ಗರ್ಭಿಣಿಯರ ಸಂಖ್ಯೆ ಹೆಚ್ಚುತ್ತಿದೆ. ಯುವಕ-ಯುವತಿಯರಿಗೆ ಕಾನೂನು ತಿಳವಳಿಕೆ ನೀಡುವುದು ತುರ್ತು ಅಗತ್ಯವಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ.ದಿಲೀಪ್ ಮಾತನಾಡಿ, ಜಿಲ್ಲೆಯಲ್ಲಿ ಮಕ್ಕಳ ಸಂರಕ್ಷಣೆಗೆ ವಿಶೇಷ ನಿಗಾ ವಹಿಸಲಾಗಿದೆ. ಮಕ್ಕಳ ಸಹಾಯವಾಣಿ 1098 ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದೆ. ಮಕ್ಕಳ ಮೇಲಿನ ಯಾವುದೇ ದೌರ್ಜನ್ಯ, ಕಿರುಕುಳ ಅಥವಾ ಹಿಂಸೆ ಕಂಡುಬಂದಲ್ಲಿ ತಕ್ಷಣ ಸಹಾಯವಾಣಿಗೆ ಕರೆ ಮಾಡಿ ಮಾಹಿತಿ ನೀಡಬಹುದು. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸ್ಥಳೀಯ ಮಟ್ಟದಲ್ಲಿ ಮಕ್ಕಳ ಸಮಸ್ಯೆಗಳ ಬಗ್ಗೆ ಮುತುವರ್ಜಿಯಿಂದ ಕ್ರಮ ಕೈಗೊಳ್ಳಬೇಕೆಂದು ಸೂಚಿಸಿದರು.

ಮಕ್ಕಳ ರಕ್ಷಣಾ ಘಟಕದ ಕಾಂತರಾಜು ಕಾರ್ಯಕ್ರಮ ನಿರ್ವಹಿಸಿದರು. ವಕೀಲ ಮನು, ಡಿವೈಎಸ್ಪಿ ಗಂಗಾಧರಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಧರಣಿ ಕುಮಾರ್ ಮತ್ತಿತರರಿದ್ದರು.

> ಬಡತನ, ಅನಕ್ಷರತೆ, ಮೌಢ್ಯ ಹೀಗೆ ನಾನಾ ಕಾರಣಗಳಿಂದ ಬಾಲ್ಯ ವಿವಾಹಗಳು ನಡೆಯುತ್ತಿವೆ. ಗ್ರಾಮ ಮಟ್ಟದಲ್ಲಿ ಇಂತಹ ಪರಿಸ್ಥಿತಿ ಕಂಡುಬಂದರೆ ತಕ್ಷಣ ಪಿಡಿಓಗಳು ಕ್ರಮ ವಹಿಸಬೇಕು. ಸ್ವಸ್ಥ ಸಮಾಜ ನಿರ್ಮಾಣದಲ್ಲಿ ಅವರ ಪಾತ್ರ ಹೆಚ್ಚಿದೆ.
>
> - ಬಿ.ಆರ್.ಪೂರ್ಣಿಮಾ, ಜಿಪಂ ಸಿಇಓ

## ಮಹಾನಗರ ಪಾಲಿಕೆ ವಾರ್ಡ್ ಮರು ವಿಂಗಡಣೆಯಲ್ಲಿ ಲೋಪ ಆರೋಪ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಾ ನಗರಪಾಲಿಕೆ ಕ್ಷೇತ್ರ ಪುನರ್ ವಿಂಗಡಣೆಯಲ್ಲಿ ಮುಸ್ಲಿಂ ಸಮುದಾಯಕ್ಕೆ ಅನ್ಯಾಯ ಮಾಡಲಾಗಿದೆ ಎಂದು ಸಮುದಾಯದ ಮುಖಂಡರು ಆರೋಪಿಸಿದ್ದು ಕಾನೂನು ಹೋರಾಟದ ಎಚ್ಚರಿಕೆ ನೀಡಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿದ ಮುಖಂಡ ಸಮೀರ್ ಖಾನ್ ಅವರು, ಹಿಂದೆ ನಗರಸಭೆ ಇದ್ದಾಗ ನಮ್ಮ ಸಮುದಾಯದ ಏಳೆಂಟು ಜನರು ಸದಸ್ಯರಾಗುವ ಅವಕಾಶವಿತ್ತು. ಆದರೆ ಈಗ ಇಬ್ಬರು ಸ್ಪರ್ಧೆ ಮಾಡಿ ಗೆಲ್ಲುವುದೂ ಕಷ್ಟವಾಗಿದೆ ಎಂದು ಅಳಲು ತೋಡಿಕೊಂಡರು.

ಹಿಂದೆ ಒಂದೊಂದು ವಾರ್ಡ್‌ನಲ್ಲಿ ಹೆಚ್ಚೆಂದರೆ ನಾಲ್ಕೈದು ಸಾವಿರ ಮತದಾರರಿದ್ದರು. ಈಗ 10, 11 ಸಾವಿರ ಮತದಾರರು ಒಂದೊಂದು ಕ್ಷೇತ್ರದಲ್ಲಿದ್ದಾರೆ. ಹಿಂದೆ ಇದ್ದ ವಾರ್ಡ್‌ಗಳನ್ನು ಛಿದ್ರ ಮಾಡಿ, ಹಂಚಿಕೆ ಮಾಡಲಾಗಿದೆ. ಪರಿಚಯ ಇಲ್ಲದ ವಾರ್ಡ್‌ಗಳಿಗೆ ಸೇರ್ಪಡೆ ಮಾಡಲಾಗಿದೆ. ಇದರಿಂದ ನಾವು ಹೆಚ್ಚಿನ ಸಂಖ್ಯೆಯಲ್ಲಿ ಸ್ಪರ್ಧಿಸಲು ಅವಕಾಶ ಇಲ್ಲದಂತಾಗಿದೆ. ಜನಸಂಖ್ಯೆ ನೋಡದೆಯೇ ಕ್ಷೇತ್ರ ವಿಂಗಡಣೆ ಮಾಡಲಾಗಿದೆ.

ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಗಮನ ಹರಿಸಬೇಕು ಎಂದು ಮನವಿ ಮಾಡಿದರು.

ಇದರಿಂದ ಮುಸ್ಲಿಂ ಮುಖಂಡರಿಗೆ ಅನ್ಯಾಯ ಆದಂತಾಗಿದೆ ಮಾತ್ರವಲ್ಲ ಅಭಿವೃದ್ಧಿಗೂ ಹಿನ್ನಡೆ ಆಗಲಿದೆ ಎಂದು ತಿಳಿಸಿದರು.

ಬೇಕಾದರೆ ವಾರ್ಡ್‌ಗಳನ್ನು ಮತ್ತಷ್ಟು ಹೆಚ್ಚಳ ಮಾಡಬಹುದಿತ್ತು. ಒಂದು ವಾರ್ಡ್‌ನಲ್ಲಿ ಕಡಿಮೆ ಮತ್ತೊಂದು ವಾರ್ಡ್‌ನಲ್ಲಿ ಹೆಚ್ಚು ಮತದಾರರನ್ನು ಸೇರಿಸುವ ಬದಲು ಸಮನಾಗಿ 5-6 ಮತದಾರರನ್ನು ಸಮನಾಗಿ ಹಂಚಿಕೆ ಮಾಡಿದರೆ ಒಳಿತು ಎಂದರು.

ಈ ಬಗ್ಗೆ ಸರ್ಕಾರ ಗಮನ ಹರಿಸಿ ಮರು ಪರಿಶೀಲನೆ ಮಾಡಬೇಕು ಎಂದು ಒತ್ತಾಯಿಸಿದರು. ಮಾತ್ರವಲ್ಲದೆ ಚುನಾವಣಾ ಆಯೋಗ ಹಾಗೂ ಸ್ಥಳೀಯ ಸಂಸದರೂ ಗಮನ ಹರಿಸಬೇಕು. ಮಾಡಲಾಗದಿದ್ದರೆ ಮೊದಲಿನಂತೆಯೇ ಉಳಿಸಲಿ ಎಂದು ಒತ್ತಾಯಿಸಿದರು.

ಎಲ್ಲ ಸೇರಿ ನಮಗೆ ಆಗಿರುವ ಅನ್ಯಾಯ ಸರಿಪಡಿಸಬೇಕು. ಸರಿಪಡಿಸದೇ ಇದ್ದರೆ ನಾವೆಲ್ಲರೂ ಸೇರಿ ಕೋರ್ಟ್ ಮೊರೆ ಹೋಗುತ್ತೇವೆ ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ನಗರಸಭೆ ಮಾಜಿ ಸದಸ್ಯ ರಫೀಕ್, ಅಕ್ಮಲ್, ಜಮೀರ್‌ಖಾನ್, ಮದನ್, ಇಮ್ರಾನ್ ಇತರರಿದ್ದರು.

## ಫೆ. 28ರಂದು ಅರಸೀಕೆರೆಯಲ್ಲಿ ಮಹಿಳೆಯರ ಮೌನ ಜಾಥಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ರಾಜ್ಯ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದಿಂದ ಈ ಬಾರಿಯ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಮಹಿಳಾ ಚೈತ್ಯನ ದಿನವಾಗಿ ಆಚರಿಸಲಾಗುತ್ತಿದ್ದು ಫೆ. 28ರಂದು ಅರಸೀಕೆರೆಯಿಂದ ಹಾಸನದ ವವರೆಗೆ ಮಹಿಳೆಯರ ಮೌನ ಜಾಗೃತಿ ಜಾಥಾ ಹೊರಡಲಿದೆ ಎಂದು ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಮಮತಾ ಶಿವು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಅರಸೀಕೆರೆ ತಾಲೂಕಿನಲ್ಲಿ ಕಪ್ಪು ಉಡುಗೆಯಲ್ಲಿ ಮಹಿಳೆಯರು ಮೌನ ಜಾಗೃತಿ ಜಾಥಾವನ್ನು ಫೆ.28 ರಂದು ಶನಿವಾರ ಸಂಜೆ 4 ಗಂಟೆಗೆ ಅರಸೀಕೆರೆಯ ಪ್ರವಾಸಿ ಮಂದಿರದಿಂದ ಹೊರಡಲಿದೆ. ಪಿ.ಪಿ.ಸರ್ಕಲ್‌ಗೆ ತೆರಳಿ ಅಲ್ಲಿ ಕಪ್ಪು ಉಡುಗೆಯಲ್ಲಿ ನೂರಾರು ಮಹಿಳೆಯರು ಸೇರಿ ಸರ್ವ ಜನಾಂಗದ ಶಾಂತಿಯ ದೇಶ ಘೋಷ ವಾಕ್ಯದಡಿ ಕ್ಯಾಂಡಲ್ ದೀಪ ಬೆಳಗಿಸಿ ಮೌನ ಪ್ರತಿರೋಧ ದಾಖಲಿಸಲಾಗುವುದು ಎಂದು ಹೇಳಿದರು.




ಕಳೆದ 13 ವರ್ಷಗಳಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಜಾಥಾ, ಸಮಾವೇಶ, ಜಾಗೃತಿ ಕಾರ್ಯಕ್ರಮ ನಡೆಸುವುದರೊಂದಿಗೆ ಜನಪರ ಹೋರಾಟಗಳಲ್ಲಿ ಭಾಗಿಯಾಗುತ್ತಿದೆ. 2013 ರಲ್ಲಿ ಮೊದಲ ಸಾರ್ವಜನಿಕ ಸಮಾವೇಶ ನಡೆಸಿತು. ಅಲ್ಲಿಂದ ಪ್ರತಿವರ್ಷ ಒಂದೊಂದು ಜಿಲ್ಲೆಯಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ನಡೆಸಲಾಗುತ್ತಿದ್ದು, ಇದೀಗ 14ನೇ ಜಿಲ್ಲೆಯಾಗಿ ಹಾಸನವನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ಎಂದರು.

2026 ಮಹಿಳಾ ಚೈತನ್ಯ ದಿನವನ್ನು ದೌರ್ಜನ್ಯವನೆಂದೂ ಸಹಿಸುವುದಿಲ್ಲ, ನ್ಯಾಯ ದಕ್ಕದೇ ಬಿಡುವುದಿಲ್ಲ ಎಂಬ ಘೋಷವಾಕ್ಯ ಇಟ್ಟುಕೊಂಡು ಆಚರಿಸುತ್ತಿದೆ. ಸಮಾನ ಮನಸ್ಕ ಸಂಘಟನೆ, ಸಂಸ್ಥೆ, ವ್ಯಕ್ತಿಗಳೊಡಗೂಡಿ ಚಾರಿತ್ರಿಕ ಮೈಲಿಗಲ್ಲಾಗುವ ಸಮಾವೇ ನಡೆಸಲು ಭರದ ಸಿದ್ಧತೆ ನಡೆದಿವೆ ಎಂದರು.

ಇದೇ ವೇಳೆ ಹಾಸನ ಜಿಲ್ಲೆಯ ವಿವಿಧ ಕ್ಷೇತ್ರಗಳ ಅಭಿವೃದ್ಧಿಯಲ್ಲಿ ಮಹಿಳೆಯ ಪಾಲ್ಗೊಳ್ಳುವಿಕೆಯನ್ನು ದಾಖಲಿಸಲು ಬರೆಸಿರುವ ಲೇಖನಗಳ ಸಂಕಲನ ಹಾಸನ ಮಣ್ಣಿನ ಹೆಣ್ಣು ಬೇರುಗಳು ಪುಸ್ತಕವೂ ಬಿಡುಗಡೆಗೊಳ್ಳಲಿದೆ ಎಂದರು.

ಮಾ.7 ರಂದು ಬೆಳಗ್ಗೆ 10 ಗಂಟೆ ಬೃಹತ್ ಹಕ್ಕೊತ್ತಾಯ ಜಾಥಾ ಮಹಾರಾಜ ಪಾರ್ಕ್‌ನಿಂದ ಹೊರಟು, ಎನ್.ಆರ್.ವೃತ್ತದಲ್ಲಿ ಮಾನವ ಸರಪಳಿ ರಚಿಸಿ ಮತ್ತೆ ಕಲಾಭವನ ಸೇರಲಿದೆ.

ಖ್ಯಾತ ಹೋರಾಟಗಾರ್ತಿ ತೀಸ್ತಾ ಸೆಟಲ್ವಾಡ್ ಸಮಾವೇಶ ಉದ್ಘಾಟಿಸುವರು. ಅದೇ ದಿನ ಸಂಜೆ ಮಹಾವೀರ ವೃತ್ತದಲ್ಲಿ ಕಪ್ಪು ಉಡುಗೆಯಲ್ಲಿ ನೂರಾರು ಮಹಿಳೆಯರು ಸೇರಿ ಸರ್ವ ಜನಾಂಗದ ಶಾಂತಿಯ ದೇಶ ಘೋಷ ವ್ಯಾಕ್ಯದಡಿ ಕ್ಯಾಂಡಲ್ ದೀಪ ಬೆಳಗಿಸಿ ಮೌನ ಪ್ರತಿರೋಧ ದಾಖಲಿಸುತ್ತೇವೆ ಎಂದರು.

ಮಾ.8 ರಂದು ಬೆಳಗ್ಗೆ ಉದ್ಘಾಟನಾ ಕಾರ್ಯಕ್ರಮ ನಂತರ ಮಹಿಳಾ ದೌರ್ಜನ್ಯ ಸವಾಲುಗಳು ಮತ್ತು ಬಿಡುಗಡೆಯ ಸಾಧ್ಯತೆಗಳು ಎಂಬ ವಿಷಯ ಕುರಿತು ವಿಚಾರ ಸಂಕಿರಣ ನಡೆಯಲಿದೆ ಎಂದರು.

ಜಿಲ್ಲಾ ಕೇಂದ್ರ ಹಾಗೂ ಎಲ್ಲಾ ತಾಲೂಕು ಮಟ್ಟದಲ್ಲಿಯೂ ಜಾಥಾ ಸಮಾವೇಶ, ಜಾಗೃತಿ ಕಾರ್ಯಕ್ರಮ ನಡೆಸುವುದರೊಂದಿಗೆ ಜನಪರ ಹೋರಾಟಗಳಲ್ಲಿ ಮಹಿಳೆಯರು ಹೆಚ್ಚಿನ ರೀತಿಯಲ್ಲಿ ಪಾಲ್ಗೊಂಡು ತಮಗಾಗುವ ದೌರ್ಜನ್ಯದ ವಿರುದ್ಧ ಧ್ವನಿ ಎತ್ತಬೇಕಿದೆ ಎಂದು ಕರೆ ನೀಡಿದರು.

## ಒಕ್ಕಲಿಗರ ಸಂಘದ ಕಲ್ಯಾಣ ಮಂಟಪ ನಿವೇಶನಕ್ಕೆ ತೆರಿಗೆ ವಿನಾಯಿತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಶೈಕ್ಷಣಿಕ ಹಾಗೂ ಸಾಮಾಜಿಕ ಕ್ಷೇತ್ರದಲ್ಲಿ ಮಹತ್ವದ ಸೇವೆ ಸಲ್ಲಿಸುತ್ತಿರುವ ಹಾಸನ ಜಿಲ್ಲಾ ಒಕ್ಕಲಿಗರ ಸಂಘದ ಕಲ್ಯಾಣ ಮಂಟಪ ನಿರ್ಮಾಣಕ್ಕೆ ರಾಜ್ಯ ಸರ್ಕಾರ ನಿವೇಶನ ಮೊತ್ತದಲ್ಲಿ ಸಂಪೂರ್ಣ ತೆರಿಗೆ ವಿನಾಯಿತಿ ನೀಡಿದೆ ಎಂದು ಒಕ್ಕಲಿಗರ ಸಂಘದ ಜಿಲ್ಲಾಧ್ಯಕ್ಷ ಜಿ.ಎಲ್.ಮುದ್ದೇಗೌಡ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, 1936ರಲ್ಲಿ ಸ್ಥಾಪನೆಯಾದ ಈ ಸಂಘ, ಶಿಕ್ಷಣ ಮತ್ತು ವಸತಿ ಸೇವೆಯನ್ನು ಮುಖ್ಯ ಗುರಿಯಾಗಿಟ್ಟುಕೊಂಡು ಕಾರ್ಯನಿರ್ವಹಿಸುತ್ತಿದೆ.

ದಿ.ಎಂ.ಆರ್. ಪುಟ್ಟಸ್ವಾಮಯ್ಯ ಅವರ ದಾನದಿಂದ ಶಂಕರ ಮಠ ರಸ್ತೆಯಲ್ಲಿ ವಿದ್ಯಾರ್ಥಿ ನಿಲಯ ಆರಂಭಗೊಂಡಿದ್ದು, ನಂತರ ದಿ.ಎ. ತಿಮ್ಮಪ್ಪ ಗೌಡರು ಸುಮಾರು 30 ವರ್ಷಗಳ ಕಾಲ ಅಧ್ಯಕ್ಷರಾಗಿ ಸೇವೆ ಸಲ್ಲಿಸಿ ಸಂಘದ ಮೂಲಸೌಕರ್ಯ




ವಿಸ್ತರಣೆಗೆ ಕಾರಣರಾದರು ಎಂದರು.


ರವೀಂದ್ರನಗರ ಹಾಗೂ ಬಿ.ಎಂ. ರಸ್ತೆಯಲ್ಲಿ ಹೆಣ್ಣುಮಕ್ಕಳಿಗೆ 900ಕ್ಕೂ ಹೆಚ್ಚು ವಸತಿ ವ್ಯವಸ್ಥೆ ಕಲ್ಪಿಸಲಾಗಿದ್ದು, ಸತ್ಯಮಂಗಲ ಬಡಾವಣೆಯಲ್ಲಿ 250 ಗಂಡು ಮಕ್ಕಳಿಗೆ ವಸತಿ ನಿಲಯ ನಿರ್ಮಿಸಲಾಗಿದೆ.

ಒಟ್ಟಾರೆ ಸುಮಾರು 1,000 ವಿದ್ಯಾರ್ಥಿಗಳಿಗೆ ವಸತಿ ಸೌಲಭ್ಯ ಒದಗಿಸಲಾಗುತ್ತಿದೆ. 2011 ರಿಂದ ಬಡ ಕುಟುಂಬಗಳ 400ಕ್ಕೂ ಹೆಚ್ಚು ಮಕ್ಕಳಿಗೆ ರಿಯಾಯಿತಿ ದರದಲ್ಲಿ ಊಟ ಮತ್ತು ನಿರ್ವಹಣಾ ವೆಚ್ಚವನ್ನು ಸಂಘವೇ ಭರಿಸುತ್ತಿದ್ದು, ವರ್ಷಕ್ಕೆ ಸುಮಾರು 25 ಲಕ್ಷ ರೂ. ವೆಚ್ಚವಾಗುತ್ತಿದೆ. ಇದುವರೆಗೆ 8,500ಕ್ಕೂ ಹೆಚ್ಚು ವಿದ್ಯಾರ್ಥಿನಿಯರು ನಿಲಯ ಸೌಲಭ್ಯ ಪಡೆದು ಶಿಕ್ಷಣ ಪೂರ್ಣಗೊಳಿಸಿದ್ದಾರೆ ಎಂದರು.

ಭವಿಷ್ಯದಲ್ಲಿ ಶಾಶ್ವತ ಆದಾಯದ ಮೂಲ ಸೃಷ್ಟಿಸುವ ಉದ್ದೇಶದಿಂದ ಎಸ್.ಎಂ.ಕೆ ನಗರದಲ್ಲಿ 1 ಎಕರೆ ನಿವೇಶನ ಪಡೆದು ಕಲ್ಯಾಣ ಮಂಟಪ ನಿರ್ಮಿಸಲು ನಿರ್ಧರಿಸಲಾಯಿತು.

ಈ ಸಂಬಂಧ ಅಂದಿನ ಶಾಸಕ ಪ್ರೀತಂ ಜೆ.ಗೌಡ ಸರ್ಕಾರದಿಂದ ನಿವೇಶನ ಮಂಜೂರು ಮಾಡಿಸಲು ಸಹಕರಿಸಿದರು. ಆದರೆ ನಿವೇಶನದ ಮೌಲ್ಯದ ಶೇ.10 ಮೊತ್ತವನ್ನು ಸಂಘ ಪಾವತಿಸಿದ ಬಳಿಕ ಉಳಿದ ಸುಮಾರು 4 ಕೋಟಿಯನ್ನು ಡಿಸಿಎಂ ಡಿ.ಕೆ. ಶಿವಕುಮಾರ್, ಕಲ್ಯಾಣ ಮಂಟಪದ ಸಮಾಜಮುಖಿ ಉದ್ದೇಶ ತಿಳಿದು ಸರ್ಕಾರದ ಮಟ್ಟದಲ್ಲಿ ಚರ್ಚಿಸಿ, ಉಳಿದ ಮೊತ್ತವನ್ನು ವಿನಾಯಿತಿ ಮಾಡಿಸಿದರು. ಇದಕ್ಕಾಗಿ ಅವರಿಗೆ ಧನ್ಯವಾದ ಹೇಳಿದರು. ಹಾಗೆಯೇ ಸಮುದಾಯ ಭವನ ನಿರ್ಮಾಣಕ್ಕೆ ನೇರ ಹಾಗೂ ಪರೋಕ್ಷವಾಗಿ ಕೊಡುಗೆ ನೀಡಿದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು, ಹಾಲಿ ಸಂಸದರಾದ ಡಾ. ಮಂಜುನಾಥ್, ಶ್ರೇಯಸ್ ಎಂ.ಪಟೇಲ್, ಎಂಎಲ್‌ಸಿ ಮಧು ಮಾದೇಗೌಡ, ಶಾಸಕರಾದ ಹೆಚ್.ಪಿ.ಸ್ವರೂಪ್ ಪ್ರಕಾಶ್, ಸಿ.ಎನ್. ಬಾಲಕೃಷ್ಣ, ಹೆಚ್.ಕೆ. ಸುರೇಶ್, ಮಾಜಿ ಶಾಸಕ ಪ್ರೀತಂಗೌಡ ಹಾಗೂ ಹಲವು ಗಣಿ ಮಾಲೀಕರು, ಗುತ್ತಿಗೆದಾರರು, ಜಿಲ್ಲಾ ಸಹಕಾರ ಬ್ಯಾಂಕ್ ಮತ್ತು ಕೃಷಿಕ್ ಸರ್ವೋದಯ ಫೌಂಡೇಶನ್ ಬೆಂಗಳೂರು ಸೇರಿ ಅನೇಕ ಜನಪ್ರತಿನಿಧಿಗಳು ಹಾಗೂ ದಾನಿಗಳು ಬೆಂಬಲ ನೀಡಿದ್ದಾರೆ. ಮುಂದೆಯೂ ಯಾರಾದರೂ ಇದ್ದರಲ್ಲಿ ನೆರವು ನೀಡಬೇಕೆಂದು ಮನವಿ ಮಾಡಿದರು. ಸಂಘದ ಪದಾಧಿಕಾರಿಗಳಾದ ಆರ್. ಅನಂತಕುಮಾರ್, ಗಣೇಶ್, ಲಕ್ಷ್ಮಣ್, ಅಪ್ಪೇಗೌಡ ಇದ್ದರು.

## ಕಾಲೇಜುಗಳು ಮಕ್ಕಳಿಗೆ ಉತ್ತಮ ವೇದಿಕೆಯಾಗಲಿ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಾಲೇಜುಗಳು ವಿದ್ಯಾರ್ಥಿಗಳಿಗೆ ಉತ್ತಮ ಬದುಕು ರೂಪಿಸುವ ವೇದಿಕೆಗಳಾಗಬೇಕು ಎಂದು ಗುಡ್ ಸಿಟಿಜನ್ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಕಾಂತರಾಜು ಹೇಳಿದರು. ಗುಡ್ ಸಿಟಿಜನ್ ಪದವಿ ಪೂರ್ವ ಕಾಲೇಜಿನಲ್ಲಿ ಏರ್ಪಡಿಸಿದ್ದ ಶಾರದಾ ಪೂಜೆಯಲ್ಲಿ ಮಾತನಾಡಿ, ರವರು ಕಾಲೇಜುಗಳು ವಿದ್ಯಾರ್ಥಿಗಳಿಗೆ ಉತ್ತಮ ಜೀವನ ರೂಪಿಸುವ ವೇದಿಕೆ ಆಗಬೇಕು. ಈ ವೇದಿಕೆಯನ್ನು ಸದುಪಯೋಗ ಪಡೆದುಕೊಂಡು ವಿದ್ಯಾರ್ಥಿಗಳು ಸಾಗಬೇಕು ಎಂದು ತಿಳಿಸಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಹೇಮಂತ್ ಕುಮಾರ್ ವಿದ್ಯಾರ್ಥಿಗಳಿಗೆ ಶುಭ ಕೋರಿದರು. ಕಾರ್ಯಕ್ರಮದಲ್ಲಿ ಎಲ್ಲಾ ವಿಭಾಗದ ಉಪನ್ಯಾಸಕರು ಉಪಸ್ಥಿತರಿದ್ದರು. ಶ್ರೀನಿವಾಸ್ ನಿರೂಪಿಸಿದರು. ಸಂಜಯ್ ಕುಮಾರ್ ಸ್ವಾಗತಿಸಿದರು.

## ಕಟ್ಟಿನಕೆರೆ ಮಾರುಕಟ್ಟೆಯಲ್ಲಿ ಪಾಲಿಕೆಯಿಂದ ಒತ್ತುವರಿ ತೆರವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಪ್ರಮುಖ ವ್ಯಾಪಾರ ಕೇಂದ್ರವಾಗಿರುವ ಕಟ್ಟಿನಕೆರೆ ಮಾರುಕಟ್ಟೆ ಪ್ರದೇಶದಲ್ಲಿ ರಸ್ತೆ ಬದಿ ಹಾಗೂ ಪಾದಚಾರಿ ಮಾರ್ಗ ಆಕ್ರಮಿಸಿ ನಿರ್ಮಿಸಲಾಗಿದ್ದ ಅನಧಿಕೃತ ಗೂಡಂಗಡಿಗಳನ್ನು ಮಹಾನಗರ ಪಾಲಿಕೆ ಅಧಿಕಾರಿಗಳು ಕಡೆಗೂ ತೆರವುಗೊಳಿಸಿದರು.

ಸುಮಾರು ಐದಾರು ಅಂಗಡಿ ತೆರವುಗೊಳಿಸುವಂತೆ ಈ ಹಿಂದ ಹಲವು ಬಾರಿ ನೋಟಿಸ್ ನೀಡಿ ಗಡುವು ನೀಡಿದ್ದರು. ಇದು ಮುಗಿದ ಹಿನ್ನೆಲೆಯಲ್ಲಿ ಮಂಗಳವಾರ ಜೆಸಿಬಿಯೊಂದಿಗೆ ತೆರವು ಕಾರ್ಯಾಚರಣೆ ನಡೆಸಿದರು.

ಕಳೆದ ಹಲವು ತಿಂಗಳಿಂದ ಮಾರುಕಟ್ಟೆ ಪ್ರದೇಶದಲ್ಲಿ ರಸ್ತೆ ಸಂಕುಚಿತವಾಗಿದ್ದು, ಸಾರ್ವಜನಿಕರು ಹಾಗೂ ವಾಹನ ಸವಾರರ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗಿತ್ತು. ಎಲ್ಲಕ್ಕಿಂತ ಮುಖ್ಯವಾಗಿ ಯುಜಿಡಿ ಕಟ್ಟಿಕೊಂಡಿರುವುದು ಗೊತ್ತಾಗದ ರೀತಿಯಲ್ಲಿ ಬಂದ್ ಮಾಡಲಾಗಿತ್ತು. ಪಾಲಿಕೆಯಿಂದ ನೀಡಿರುವ ಮಳಿಗೆಗಿಂತ ಮುಂದೆ ರಸ್ತೆ ಬದಿಯ ಜಾಗ ಒತ್ತುವರಿ ಮಾಡಿದ್ದಲ್ಲದೆ, ಪ್ಲಾಸ್ಟಿಕ್ ಟಾರ್ಪಲನ್ನು ರಸ್ತೆ ಮುಚ್ಚುವಂತೆ ಹಾಕಿಕೊಂಡು ವ್ಯಾಪಾರ ನಡೆಸುತ್ತಿದ್ದರು.

ಈ ಹಿನ್ನೆಲೆಯಲ್ಲಿ ಮಹಾ ನಗರಪಾಲಿಕೆ ಇಂಜಿನಿಯರ್ ಕೆ.ಆರ್.ಕವಿತಾ ಅವರ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆ ನಡೆಸಲಾಯಿತು. ಇದಕ್ಕೆ ಕೆಲ ವ್ಯಾಪಾರಸ್ಥರು ವಿರೋಧ ವ್ಯಕ್ತಪಡಿಸಿದರು.

ಆದರೂ ಅಧಿಕಾರಿಗಳು ತಾವು ಬಂದ ಕಾರ್ಯ ಮಾಡಿ ಮುಗಿಸಿದರು.

ಈ ವೇಳೆ ಮಾತನಾಡಿದ ಕವಿತಾ, ರಸ್ತೆ ಒತ್ತುವರಿ ಮಾಡಿಕೊಂಡು ಅಂಗಡಿಗಳನ್ನು ನಿರ್ಮಿಸಿಕೊಂಡಿದ್ದ ವ್ಯಾಪಾರಿಗಳಿಗೆ ಪೂರ್ವ ಸೂಚನೆ ನೀಡಲಾಗಿದ್ದು, ಸ್ವಯಂ ಪ್ರೇರಿತವಾಗಿ ತೆರವುಗೊಳಿಸುವುದಕ್ಕೂ ಹಲವು ಬಾರಿ ಗಡುವು ನೀಡಲಾಗಿತ್ತು. ಆದರೆ ಸೂಚಿಸಿದ ಅವಧಿಯೊಳಗೆ ಕೆಲವರು ಅಂಗಡಿಗಳನ್ನು ತೆರವು ಮಾಡಿದ್ದರು. ಇನ್ನಷ್ಟು ಮಂದಿ ಒತ್ತುವರಿ ತೆರವುಗೊಳಿಸದ ಹಿನ್ನಲೆಯಲ್ಲಿ ಇಂದು ತೆರವು ಕಾರ್ಯಾಚರಣೆ ಮಾಡಲಾಗುತ್ತಿದೆ ಎಂದರು.



ಮಾರುಕಟ್ಟೆಗೆ ದಿನನಿತ್ಯ ಸಾವಿರಾರು ಜನರು ಆಗಮಿಸುವ ಹಿನ್ನೆಲೆಯಲ್ಲಿ ರಸ್ತೆ ಒತ್ತುವರಿ ಕಾರಣದಿಂದಾಗಿ ತುರ್ತುವಾಹನ ಸಂಚಾರಕ್ಕೂ ಅಡಚಣೆ ಉಂಟಾಗುತ್ತಿತ್ತು. ಪಾದಚಾರಿಗಳಿಗೆ ಸುರಕ್ಷಿತವಾಗಿ ನಡೆಯಲು ಅವಕಾಶ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿತ್ತು. ಸಾರ್ವಜನಿಕರ ಅನೇಕ ದೂರುಗಳ ಆಧಾರದ ಮೇಲೆ ಈ ಕ್ರಮ ಕೈಗೊಳ್ಳಲಾಗಿದೆ ಎಂದರು.

ಮುಂದಿನ ದಿನಗಳಲ್ಲಿ ನಗರ ವ್ಯಾಪ್ತಿಯ ಇತರೆ ಪ್ರಮುಖ ರಸ್ತೆಗಳಲ್ಲೂ ಸಹ ಒತ್ತುವರಿ ತೆರವು ಕಾರ್ಯಾಚರಣೆ ಹಂತ ಹಂತವಾಗಿ ಮುಂದುವರಿಯಲಿದೆ. ನಿಯಮ ಉಲ್ಲಂಘನೆ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಗರದಲ್ಲಿ ಸುಗಮ ಸಂಚಾರ ಹಾಗೂ ಶಿಸ್ತಿನ ವ್ಯಾಪಾರ ವಾತಾವರಣಕ್ಕೆ ತರುವ ಉದ್ದೇಶದಿಂದ ಇಂತಹ ಕಾರ್ಯಾಚರಣೆ ನಿರಂತರವಾಗಿ ನಡೆಯಲಿವೆ ಎಂದು ಸ್ಪಷ್ಟಪಡಿಸಿದರು. ಈ ಒತ್ತುವರಿ ಕಾರ್ಯಾಚರಣೆ ಮಾಡುವಾಗ ರಾಜಕೀಯದಿಂದ ಕೆಲ ಕರೆಗಳ ಮೂಲಕ ಒತ್ತಡ ತಂದು ನಮ್ಮ ಕಾರ್ಯಾಚರಣೆಗೆ ಅಡಚಣೆ ಮಾಡುತ್ತಿರುವುದಾಗಿ ಹೇಳಿದರು.

ಇದಲ್ಲದೇ ಕೆಲ ಸೋಷಿಯಲ್ ಮೀಡಿಯಾದವರು ತಾಕತ್ತು ಇಲ್ಲವೇ ಎಂದು ಹೇಳುತ್ತಿದ್ದಾರೆ. ಕೆಲ ವ್ಯಕ್ತಿಗಳ ಬಳಿ ಸಾಕ್ಷಿ ಇಲ್ಲದೇ, ನಮ್ಮ ಬಗ್ಗೆ ಹೇಳಿಕೆ ಪಡೆಯುತ್ತಿದ್ದಾರೆ. ನಮ್ಮ ಸರಕಾರಿ

ಕೆಲಸಕ್ಕೆ ಅಡ್ಡಿಪಡಿಸುವ ಕೆಲಸ ಮಾಡುತ್ತಿದ್ದಾರೆ. ಕೆಲ ಸಾಮಾಜಿಕ ಜಾಲತಾಣದಲ್ಲಿ ಏಕಪಕ್ಷೀಯವಾಗಿ ಪ್ರಸಾರ ಮಾಡಲಾಗುತ್ತಿದೆ. ಇದರಿಂದ ನಮಗೂ ಕೆಟ್ಟ ಹೆಸರು ತರುವ ಕೆಲಸ ಮಾಡುತ್ತಿದ್ದಾರೆ. ಯಾವುದೇ ವೃತ್ತಿ ಇಲ್ಲದೇ ಕೆಲವರಿಂದ ಕಾರು ಪಡೆದು, ಕಂದಾಯ ಕಟ್ಟದೆ ಐಸರಾಮಿ ಜೀವನ ನಡೆಸುತ್ತಿರುವ ಬಗ್ಗೆ ದೂರು ಕೇಳಿ ಬಂದಿದ್ದು, ಸಂಬಂಧಪಟ್ಟವರಿಗೆ ದೂರು ನೀಡುವುದಾಗಿ ತಿಳಿಸಿದರು.

ಕನ್ನಡ ಪೋಸ್ಟ್

E-mail : kannadapostnews@gmail.com facebook.com / ಕನ್ನಡ post



# ಜಾತಿ ನಿಂದನೆ ಕಾಯ್ದೆ ದುರುಪಯೋಗ ಖಂಡಿಸಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಸಕಲೇಶಪುರ: ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ ಅವರು ಜಾತಿ ನಿಂದನೆ ಕಾಯ್ದೆ ದುರ್ಬಳಕೆ ಮಾಡಿಕೊಂಡಿದ್ದು ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು ಎಂದು ಆಗ್ರಹಿಸಿ ಪಟ್ಟಣದಲ್ಲಿ ವಕೀಲರು ಪ್ರತಿಭಟನೆ ನಡೆಸಿದರು.

ಪುರಸಭೆ ಹಾಗೂ ವಕೀಲ ಅಭಿಜ್ಞಾನ್ ಅವರ ನಡುವೆ ಪಿತ್ರಾರ್ಜಿತ ಆಸ್ತಿಗೆ ಸಂಬಂಧಿಸಿದ ವಿವಾದ ಉಂಟಾಗಿತ್ತು. ಕಳೆದ 70 ವರ್ಷಗಳಿಂದ ನಡೆಯುತ್ತಿರುವ ಸಕಲೇಶಪುರ ಜಾತ್ರೆ ಹಾಗೂ ದನಗಳ ಜಾತ್ರೆ ನಡೆಯುವ ಸುಭಾಷ್ ಮೈದಾನ ಹಾಗೂ ಪಕ್ಕದಲ್ಲಿರುವ ತಾಲೂಕು ಕ್ರೀಡಾಂಗಣದಲ್ಲಿ ಇರುವ ಆಸ್ತಿ ತಮ್ಮ ವಾರಸುದಾರರಿಂದ ತಮಗೆ ಬಂದಿದ್ದು, ಅದನ್ನು ತಮ್ಮ ತಂದೆಯ ಹೆಸರಿಗೆ ಖಾತೆ ಬದಲಾವಣೆ ಮಾಡಿಕೊಡಬೇಕೆಂದು ಅಭಿಜ್ಞಾನ್ ಪಟ್ಟಣ ಪುರಸಭೆಗೆ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಗೆ ಯಾವುದೇ ಪ್ರತಿಕ್ರಿಯೆ ಸಿಗದ ಹಿನ್ನೆಲೆಯಲ್ಲಿ ಖಾತೆ ಬದಲಾವಣೆಯಲ್ಲಿ ಪುರಸಭೆ ಅಧಿಕಾರಿಗಳು ವಿಳಂಬ ಧೋರಣೆ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿ ಕಳೆದ ವಾರ ವಕೀಲ ಹಾಗೂ ಭೂಮಾಲೀಕ ಅಭಿಜ್ಞಾನ್ ಅವರು ಜಿಲ್ಲಾಧಿಕಾರಿ ಕಚೇರಿ ಎದುರು ದಾಖಲೆಗಳನ್ನು ಎಸೆದು ಪ್ರತಿಭಟನೆ ನಡೆಸಿದ್ದರು. ಈ ವೇಳೆ ನಡೆದ ಚರ್ಚೆಯಲ್ಲಿ ನೀವು ತೊಂದರೆ ನೀಡಿದರೆ ಜಾತಿ ನಿಂದನೆ ಪ್ರಕರಣ ದಾಖಲಿಸಲಾಗುವುದು ಎಂದು ಪುರಸಭೆ ಮುಖ್ಯಾಧಿಕಾರಿ ಹೇಳಿದ್ದಾರೆ. ನಂತರ ಈ ಪ್ರಕರಣಕ್ಕೆ ಸಂಬಂಧಿಸಿ ಅಭಿಜ್ಞಾನ್ ವಿರುದ್ಧ ಅಟ್ರಾಸಿಟಿ ಕೇಸ್ ದಾಖಲಿಸಿದ್ದಾರೆ ಎಂದು ಆರೋಪಿಸಿದರು.

ಜಾತಿ ನಿಂದನೆ ಕಾಯ್ದೆಯನ್ನು ದುರ್ಬಳಕೆ ಮಾಡಿಕೊಂಡು ಸಾರ್ವಜನಿಕರಿಗೆ ವಿನಾಕಾರಣ ತೊಂದರೆ ನೀಡುತ್ತಿರುವ ಅಧಿಕಾರಿಗಳನ್ನು ತಕ್ಷಣ ಅಮಾನತುಪಡಿಸಿ ಇಲಾಖಾ ಕ್ರಮ ಕೈಗೊಳ್ಳಬೇಕು ಹಾಗೂ ನೊಂದವರಿಗೆ ನ್ಯಾಯ ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಪುರಸಭೆ ಕಚೇರಿ ಬಳಿ ಜಮಾಯಿಸಿದ ವಕೀಲರು ಮನವಿ ಸಲ್ಲಿಸಲು ಗಂಟೆಗಟ್ಟಲೆ ಕಾದರು. ಆದರೆ ಮುಖ್ಯಾಧಿಕಾರಿ ಸ್ಥಳಕ್ಕೆ ಆಗಮಿಸದ ಕಾರಣ ಆಕ್ರೋಶಗೊಂಡ ವಕೀಲರು ಕಚೇರಿಗೆ ಬೀಗ ಹಾಕಲು ಮುಂದಾದರು. ಈ ವೇಳೆ ವಕೀಲರು ಹಾಗೂ ಪೊಲೀಸರ ನಡುವೆ ವಾಗ್ವಾದ ನಡೆಯಿತು.

ಪರಿಸ್ಥಿತಿ ಉದ್ವಿಗ್ನಗೊಂಡ ಹಿನ್ನೆಲೆಯಲ್ಲಿ ಸ್ಥಳಕ್ಕೆ ಆಗಮಿಸಿದ ಪ್ರಭಾರ ಉಪವಿಭಾಗಾಧಿಕಾರಿ ಮಂಜುನಾಥ್ ಅವರನ್ನು ಪ್ರತಿಭಟನಾಕಾರರು ಸುತ್ತುವರಿದು ತಮ್ಮ ಆಕ್ಷೇಪ ತಿಳಿಸಿದರು. ಅಭಿಜ್ಞಾನ್ ವಿರುದ್ಧ ದಾಖಲಿಸಿರುವ ಅಟ್ರಾಸಿಟಿ ಕೇಸ್ ಅನ್ನು ಕೂಡಲೇ ವಾಪಸ್ ಪಡೆಯಬೇಕು ಹಾಗೂ ಖಾತೆ ಬದಲಾವಣೆ ಸಂಬಂಧ ನ್ಯಾಯಸಮ್ಮತವಾಗಿ ಕ್ರಮ ಕೈಗೊಳ್ಳಬೇಕು ಎಂದು ವಕೀಲರು ಮನವಿ ಸಲ್ಲಿಸಿದರು.

ಜಿಲ್ಲೆಯ ವಿವಿಧ ಭಾಗಗಳಿಂದ ವಕೀಲರು ನ್ಯಾಯಾಲಯದ ಕಾರ್ಯಕಲಾಪಗಳಿಂದ ಸಾಂಕೇತಿಕವಾಗಿ ಹೊರಗುಳಿದು ಪ್ರತಿಭಟನೆ ನಡೆಸಿದರು. ಹಳೆ ಬಸ್ ನಿಲ್ದಾಣದ ಮುಂಭಾಗ ಕೆಲಕಾಲ ಮಾನವ ಸರಪಳಿ ನಿರ್ಮಿಸಿ, ಮುಖ್ಯಾಧಿಕಾರಿ ಮಹೇಶ್ವರಪ್ಪ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಉಪವಿಭಾಗಾಧಿಕಾರಿ ಮೂಲಕ ಮಹೇಶ್ವರಪ್ಪ ಅವರನ್ನು ಅಮಾನತು ಮಾಡುವಂತೆ ಆಗ್ರಹಿಸಿದರು.

ವಕೀಲರ ಸಂಘದ ಜಿಲ್ಲಾಧ್ಯಕ್ಷ ಕಾರ್ಲೆ ಮೊಗಣ್ಣಗೌಡ, ತಾಲೂಕು ವಕೀಲರ ಸಂಘದ ಅಧ್ಯಕ್ಷ ಯಶ್ವಂತ್, ಜಿಲ್ಲಾ ಕಾರ್ಯದರ್ಶಿ ಹೊಂಬೇಶ್, ರಘು, ಆಲೂರು ಮಹೇಂದ್ರ, ಆರ್.ಬಿ. ಸುರೇಶ್, ಹೊಳೆನರಸೀಪುರ ತಾಲೂಕು ವಕೀಲರ ಸಂಘದ ಮಾಜಿ ಅಧ್ಯಕ್ಷ ನಟರಾಜ್, ತಾಲ್ಲೂಕು ವಕೀಲರ ಸಂಘದ ಮಾಜಿ ಅಧ್ಯಕ್ಷ ಪ್ರದೀಪ್, ಕಾರ್ಯದರ್ಶಿ ವಾಣಿ, ಉಪಾಧ್ಯಕ್ಷ ಮಹೇಶ್, ಹರೀಶ್, ಪಿತಂಬರಾಚಾರ್, ರಿಜ್ವಾನ್ ಹಾಗೂ ಇತರರಿದ್ದರು.

# ಅಮೃತೇಶ್ವರಸ್ವಾಮಿ ಮಹಾ ರಥೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಪಟ್ಟಣದ ಕೋಟೆ ಪುರಾಣ ಪ್ರಸಿದ್ಧ ಅಮೃತೇಶ್ವರಸ್ವಾಮಿ ಮಹಾ ರಥೋತ್ಸವ ಭಕ್ತರ ಸಮ್ಮುಖದಲ್ಲಿ ವೈಭವದಿಂದ ನೆರವೇರಿತು.

ಬೆಳಿಗ್ಗೆ ದೇವಾಲಯದಲ್ಲಿ ಮೂಲ ವಿಗ್ರಹಕ್ಕೆ ಅಭಿಷೇಕ, ಪೂಜಾ ಕೈಂಕರ್ಯಗಳು ನೆರವೇರಿದವು. ಬಳಿಕ ಉತ್ಸವ ಮೂರ್ತಿಗಳನ್ನು ಅಲಂಕರಿಸಿ ಕೃಷ್ಣಗಂಧೋತ್ಸವ ನಡೆಸಲಾಯಿತು. ಉತ್ಸವದಲ್ಲಿ ಬಂದ ಮೂರ್ತಿಗಳನ್ನು ಅಲಂಕರಿಸಿದ ರಥದಲ್ಲಿ ಪ್ರತಿಷ್ಠಾಪಿಸಿ ಪೂಜಾ ವಿಧಿಗಳನ್ನು ನಡೆಸಲಾಯಿತು. ಅರೇಮಾದನಹಳ್ಳಿ ವಿಶ್ವಕರ್ಮ ಮೂಲ ಮಠದ ಶಿವಸುಜ್ಞಾನ ತೀರ್ಥ ಸ್ವಾಮೀಜಿ, ತಹಶೀಲ್ದಾರ್ ಕೆ.ಸಿ. ಸೌಮ್ಯ ರಥಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು. ನೆರೆದಿದ್ದ ಭಕ್ತರು ಶಿವನಾಮ ಸ್ಮರಣೆ ಮಾಡುತ್ತಾ ರಥ ಬೀದಿಯಲ್ಲಿ ತೇರನ್ನು ಎಳೆದು ಸಂಭ್ರಮಿಸಿದರು. ನಾದಸ್ವರ, ತಮಟೆ ವಾದ್ಯಗಳು ರಥೋತ್ಸವಕ್ಕೆ ಮೆರಗು ನೀಡಿತು. ತಮಟೆ ವಾದ್ಯ ಲಯಕ್ಕೆ ಯುವಕರು, ಚಿಣ್ಣರು, ಮಹಿಳೆಯರು ಹೆಜ್ಜೆ ಹಾಕಿದರು. ತೇರನ್ನು ಎಳೆಯುತ್ತಿದ್ದ ಭಕ್ತರಿಗೆ ಬಿಸಿಲಿನ ದಗೆ ನೀಗಿಸಲು ಮನೆ, ಮನೆಗಳಲ್ಲಿ ಮಜ್ಜಿಗೆ, ಪಾನಕ, ಮುಂತಾದ ತಂಪು ಪಾನೀಯ ವಿತರಿಸಲಾಯಿತು.

ರಥ ಸ್ವಸ್ಥಾನ ಸೇರಿದ ಬಳಿಕ ಪ್ರಸಾದ ವಿನಿಯೋಗ ನಡೆಸಲಾಯಿತು. ಪಪಂ ಮುಖ್ಯಾಧಿಕಾರಿ ಸಿ.ಡಿ. ನಾಗೇಂದ್ರಕುಮಾರ್, ಕಂದಾಯ ನಿರೀಕ್ಷಕ ಕೆ.ಸಿ. ಲೋಕೇಶ್, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಪುಟ್ಟರಾಜ್, ಮುಖಂಡರಾದ ಮುತ್ತಿಗೆ ರಾಜೇಗೌಡ, ವಿ.ಎ. ನಂಜುಂಡಸ್ವಾಮಿ, ನರಸೇಗೌಡ, ವೆಂಕಟೇಶ್, ರಮೇಶ್ ವಾಟಾಳ್, ನಿತ್ಯಜ್ಯೋತಿ ನಾಗರಾಜ್, ಎ.ಎಸ್. ಹಿರಣ್ಣಯ್ಯ, ಎ.ಎನ್. ಗಣೇಶಮೂರ್ತಿ, ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ನರಸಿಂಹ ಮೂರ್ತಿ, ಕಾರ್ಯದರ್ಶಿ ರಮೇಶ್ ಉಪಸ್ಥಿತರಿದ್ದರು.

# ಆರ್ಥಿಕ ಸ್ಥಿತಿವಂತರು ಸಮಾಜ ಸೇವೆಯಲ್ಲಿ ತೊಡಗಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ತಾಲೂಕು ವ್ಯಾಪ್ತಿಯ ಸರ್ಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳು ಹಾಗೂ ಪ್ರೌಢಶಾಲೆಗಳ ಸರ್ವತೋಮುಖ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲೂಕಿನ ಹಿರೀಸಾವೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಎಬನ್ ಪ್ಲಾಸ್ಟ್ ಪೈಪ್ ಕಂಪನಿ ವತಿಯಿಂದ ಆಯೋಜಿಸಿದ್ದ ಉಚಿತ ಬ್ಯಾಗ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ಉಳ್ಳವರು ಮನಸ್ಸು ಮಾಡಿದರೆ ಎಲ್ಲವೂ ಸಾಧ್ಯ.

ತಾಲೂಕು ವ್ಯಾಪ್ತಿಯ ಸರ್ಕಾರಿ ಹಿರಿಯ ಮತ್ತು ಕಿರಿಯ ಪ್ರಾಥಮಿಕ ಶಾಲೆಗಳ 6000 ವಿದ್ಯಾರ್ಥಿಗಳಿಗೆ ಬ್ಯಾಗ್ ವಿತರಣೆ ಮಾಡಲಿದ್ದು, ಮುಂದಿನ ವರ್ಷದಿಂದ 8 ರಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಬ್ಯಾಗ್ ವಿತರಣೆ ಮಾಡಲು ವ್ಯವಸ್ಥೆ ರೂಪಿಸಲಾಗುವುದು ಎಂದು ತಿಳಿಸಿದರು.

ಸರ್ಕಾರವು ಶೈಕ್ಷಣಿಕ ವ್ಯವಸ್ಥೆಯನ್ನು ಅಭಿವೃದ್ಧಿಗೊಳಿಸುವ ಹಾಗೂ ಬಡ ಕುಟುಂಬಗಳಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಉಚಿತವಾಗಿ ಸಮವಸ್ತ್ರ, ಪುಸ್ತಕ, ಕ್ಷೀರಭಾಗ್ಯ ಸೇರಿದಂತೆ ವಿವಿಧ ಸೌಲಭ್ಯಗಳೊಂದಿಗೆ ಉಚಿತ ಶಿಕ್ಷಣ ನೀಡುತ್ತಿದೆ. ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ಮಕ್ಕಳಿಗೆ ಶಿಕ್ಷಣದ ಜೊತೆಗೆ ನೀತಿ ಪಾಠದ ಬೋಧನೆ ಅಗತ್ಯವಿದ್ದು ದಿನದ 15 ನಿಮಿಷಗಳ ಕಾಲ ಮೀಸಲಿಟ್ಟು ನೀತಿ ಪಾಠ ಬೋಧನೆ ಮಾಡುವಲ್ಲಿ ಶಿಕ್ಷಕರು ಮುಂದಾಗಬೇಕು. ಇದರಿಂದ ಮಕ್ಕಳಲ್ಲಿ ಸಾಮಾನ್ಯ ಜ್ಞಾನ ಹೆಚ್ಚಲಿದೆ ಎಂದರು.

ಶಾಲಾ ಹಾಗೂ ಕಾಲೇಜು ವ್ಯಾಪ್ತಿಯಲ್ಲಿ ಸರ್ಕಾರದ ನಿಯಮಗಳ ಪ್ರಕಾರ ತಂಬಾಕು ಮುಕ್ತ ಮಾಡಲಾಗಿದೆ.

ಆದರೆ ಪಟ್ಟಣ ವ್ಯಾಪ್ತಿಯಲ್ಲಿ ಡ್ರಗ್ಸ್ ಮಾಫಿಯಾ ಕಂಡು ಬರುತ್ತಿದ್ದು ಮಕ್ಕಳಿಗೆ ಅರಿವು ಮೂಡಿಸುವ ಕಾರ್ಯಕ್ರಮ ಕೈಗೊಳ್ಳಬೇಕು ಎಂದು ಎಚ್ಚರಿಸಿದರು.

ಪಿಎಂ ಶ್ರೀ ಶಾಸಕರ ಮಾದರಿ ಶಾಲೆಯಲ್ಲಿ ಒಳ್ಳೆಯ ಶೈಕ್ಷಣಿಕ ವಾತಾವರಣ ಸೃಷ್ಟಿಯಾಗಿದೆ. ಬಾಲಕೀಯರ ಶಾಲೆಗೆ 15 ಲಕ್ಷ ರೂ. ವೆಚ್ಚದಲ್ಲಿ ಹೊಸಾ ಕಟ್ಟಡ ಕಲ್ಪಿಸುವಂತೆ ಸರ್ಕಾರಕ್ಕೆ ಮನವಿ ಮಾಡಲಾಗಿದೆ. ಶೀಘ್ರದಲ್ಲಿಯೇ ಅನುದಾನ ತಂದು ಕಾಮಗಾರಿಗೆ ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಶಾಸಕರು ವಿದ್ಯಾರ್ಥಿಗಳಿಗೆ ಬ್ಯಾಗ್ ವಿತರಣೆ ಮಾಡಿದರು. ರಾಜ್ಯ ಜೆಡಿಎಸ್ ಉಪಾಧ್ಯಕ್ಷ ಎಚ್.ಜಿ.ರಾಮಕೃಷ್ಣ, ಗ್ರಾಮ ಪಂಚಾಯಿತಿ ಅಧ್ಯಕ್ಷ ಪರಮೇಶ್, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್.ಜೆ.ಮಹೇಶ್, ನಿರ್ದೇಶಕ ಬಾಬು, ಎಸ್‌ಡಿಎಂಸಿ ಅಧ್ಯಕ್ಷ ರಘು ಮತ್ತಿತರರಿದ್ದರು.

# ನಾಗಮೋಹನ ದಾಸ್ ವರದಿ ವಿರುದ್ಧ ಬೇಲೂರಿನಲ್ಲಿ ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು: ನಿವೃತ್ತ ನ್ಯಾಯಾಧೀಶರಾದ ನಾಗಮೋಹನ ದಾಸ್ ಅವರ ಏಕಸದಸ್ಯ ಆಯೋಗ ಸರ್ಕಾರಕ್ಕೆ ಸಲ್ಲಿಸಿರುವ ವರದಿ ರಾಜ್ಯದ ಬಲಗೈ ಸಮುದಾಯಕ್ಕೆ ಮರಣ ಶಾಸನವಾಗಿದೆ ಎಂದು ಆರೋಪಿಸಿ ತಾಲ್ಲೂಕಿನ ಬಲಗೈ ಸಮುದಾಯದ ಮುಖಂಡರು ಪಟ್ಟಣದ ಬಸವೇಶ್ವರ ವೃತ್ತದಲ್ಲಿ ರಸ್ತೆತಡೆ ಪ್ರತಿಭಟಿಸಲಾಯಿತು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಪರ್ವತಯ್ಯ ಮಾತನಾಡಿ, ನಾಗಮೋಹನ್ ದಾಸ್ ವರದಿ ಅನ್ವಯ, ಶಿಕ್ಷಣ, ರಾಜಕೀಯ ಮತ್ತು ನೂತನ ಸರ್ಕಾರಿ ನೇಮಕಾತಿಗಳಲ್ಲಿ ಬಲಗೈ ಸಮುದಾಯವನ್ನು ವಂಚಿಸುವ, ಬಲಗೈ ಸಂಬಂಧಿಸಿದ ಗುಂಪಿಗೆ ಹುದ್ದೆಗಳನ್ನೇ ನೀಡದಿರುವ ಪ್ರಕರಣ ಬೆಳಕಿಗೆ ಬಂದಿರುವುದು ಆತಂಕದ ವಿಷಯ. ಈ ನಿಟ್ಟಿನಲ್ಲಿ ಬಲಗೈ ಸಮುದಾಯಕ್ಕೆ ಒಳ ಮೀಸಲಾತಿ ವರದಿ ಈಗ ಮರಣ ಶಾಸನವಾಗಿ ಪರಿಣಮಿಸಿದೆ. ಇದನ್ನು ಕೂಡಲೇ ಸರ್ಕಾರ ತಿದ್ದುಪಡಿ ಮಾಡದಿದ್ದರೆ, ರಾಜ್ಯಾದ್ಯಂತ ಬಲಗೈ ಸಮುದಾಯದ ಮುಂದಿನ ತಲೆಮಾರಿಗೆ ಮೀಸಲಾತಿ ಮರೀಚಿಕೆಯಾಗುತ್ತದೆ ಎಂದು ಹೇಳಿದರು.

ಸರ್ಕಾರ ಒಳ ಮೀಸಲಾತಿ ವರದಿಯಲ್ಲಿ ಆಗಿರುವ ತಪ್ಪುಗಳನ್ನು ಪರಿಷ್ಕರಿ ಬಲಗೈ ಸಮುದಾಯಕ್ಕೆ ನ್ಯಾಯ ಒದಗಿಸಬೇಕು. ಒಂದು ವೇಳೆ ನಮ್ಮ ಪ್ರತಿಭಟನೆಗೆ ಪ್ರತಿಫಲ ಸಿಗದೇ ಹೋಗಿದ್ದಲ್ಲಿ ಮುಂದಿನ ದಿನಗಳಲ್ಲಿ ಬಲಗೈ ಸಮುದಾಯು ಉಗ್ರ ಪ್ರತಿಭಟನೆ ಮಾಡಲಿದೆ ಎಂದು ಎಚ್ಚರಿಕೆ ನೀಡಿದರು.

ಶಿಕ್ಷಣ, ಉದ್ಯೋಗ ರಾಜಕೀಯ ಒಳ-ಮೀಸಲಾತಿ ವರದಿ ಸಮಸ್ಯೆ ಸಂಪೂರ್ಣವಾಗಿ ಬಗೆಹರಿಯುವ ತನಕ, ಪ್ರಸ್ತುತ ಶೈಕ್ಷಣಿಕ ವಲಯ ಮತ್ತು ಉದ್ಯೋಗಕ್ಕೆ ಅನುಸರಿಸುತ್ತಿರುವ ಕಾರ್ಯ ಚಟುವಟಿಕೆಗಳಿಗೆ ಶೀಘ್ರವೇ ತಡೆಯಾಜ್ಞೆ ನೀಡಬೇಕು. ಹೊಸ ಜಾತಿ ಪ್ರಮಾಣ ಪತ್ರ ನೀಡುತ್ತಿರುವುದನ್ನು ತುರ್ತಾಗಿ ನಿಲ್ಲಿಸಿ, ಹಳೇ ಜಾತಿ ಪ್ರಮಾಣ ಪತ್ರವನ್ನೇ ಮುಂದುವರಿಸಬೇಕೆಂದು ಆಗ್ರಹಿಸಿದರು.

ಒಳ-ಮೀಸಲಾತಿಗೆ ಅನ್ವಯಿಸಿರುವ ರೋಸ್ಟರ್ ಬಿಂದುವನ್ನು ಪರಿಷ್ಕರಿಸಬೇಕು. ನಾಗಮೋಹನದಾಸ್ ಅವರ ಒಳ-ಮೀಸಲಾತಿ ವರದಿಯನ್ನು ಸಂಪೂರ್ಣ ಪರಿಸ್ಕರಿಸುವುದು ಮತ್ತು ಅದರಲ್ಲಿರುವ ನ್ಯೂನತೆಗಳನ್ನು ಸರಿಪಡಿಸಬೇಕು. ಖಾಲಿ ಇರುವ ಬ್ಯಾಕ್ ಲಾಗ್ ಹುದ್ದೆಗಳನ್ನು ಶೀಘ್ರವೇ ಭರ್ತಿ ಮಾಡಬೇಕು. ರಾಜ್ಯದಲ್ಲಿ ಬಲಗೈ ಸಮುದಾಯಗಳ ಸಂಖ್ಯೆ ಹೆಚ್ಚು ಇರುವುದರಿಂದ ನಮ್ಮ ಸಮುದಾಯಕ್ಕೆ ಪ್ರವರ್ಗ-ಎ ಸ್ಥಾನವನ್ನು ನೀಡಬೇಕು. ಈ ಎಲ್ಲಾ ಗೊಂದಲಗಳಿಗೆ ಪರಿಹಾರ ನೀಡುವ ತನಕ ಹಳೆಮೀಸಲಾತಿಯನ್ನೇ ಅನ್ವಯಿಸಿ, ಖಾಲಿ ಹುದ್ದೆಗಳನ್ನು ಭರ್ತಿ ಮಾಡುವುದು ಎಂದು ಒತ್ತಾಯಿಸಿದರು.

ಮುಖಂಡರಾದ ಚಿಕ್ಕಬ್ಯಾಡಿಗೆರೆ ಮಂಜುನಾಥ, ಕುಮಾರ್, ದೇವಿಹಳ್ಳಿ ಮಲ್ಲಿಕಾರ್ಜುನ, ವೆಂಕಟೇಶ, ನೆಟ್ಟಕೆರೆ ಮಂಜುನಾಥ, ಗೋವಿನಹಳ್ಳಿ ರವಿ, ಚಿಕ್ಕ ಬ್ಯಾಡಗಿರೆ ಮಂಜುನಾಥ್, ರಮೇಶ್ ಇದ್ದರು.

# ಅದ್ದೂರಿ ಕುಂಭ ಮಹೋತ್ಸವ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಹಾನಗರ ಪಾಲಿಕೆಯ ವ್ಯಾಪ್ತಿಯ ಬಿ.ಎಂ.ರಸ್ತೆಗೆ ಹೊಂದಿಕೊಂಡಿರುವ ದೊಡ್ಡಮಂಡಿಗನಹಳ್ಳಿ ಗ್ರಾಮದಲ್ಲಿ ನೆಲೆಸಿರುವ ಇತಿಹಾಸ ಪ್ರಸಿದ್ಧ ಶ್ರೀ ಗುಹೆಕಲ್ಲಮ್ಮ, ಶ್ರೀ ಚಿಕ್ಕಮ್ಮ ದೇವಿಯವರ ಮಹಾಶಿವರಾತ್ರಿ ಪ್ರಯುಕ್ತ 30ನೇ ವರ್ಷದ ಅದ್ದೂರಿ ಕುಂಭ ಮಹೋತ್ಸವ ವಿಜೃಂಭಣೆಯಿಂದ ನೆರವೇರಿತು.

ಫೆ.15ರ ಭಾನುವಾರ ಬೆಳಿಗ್ಗೆ 7.30 ರಿಂದ ತಣ್ಣೀರುಹಳ್ಳ ಹಳ್ಳದ ರಾಮೇಶ್ವರ ದೇವಸ್ಥಾನದಿಂದ 101 ಕಳಸ ಹಾಗೂ ಹೂವಿನ ಮಂಟಪದಲ್ಲಿ ಅಮ್ಮನವರ ಮೆರವಣಿಗೆಯು ಪ್ರಮುಖ ರಾಜ ಬೀದಿಗಳಲ್ಲಿ ಸಂಚರಿಸಿ ದೊಡ್ಡ ಮಂಡಿಗನಹಳ್ಳಿ ಗ್ರಾಮಕ್ಕೆ ಬಂದಿತು. ಮಧ್ಯಾಹ್ನ 12.30ಕ್ಕೆ ಅಮ್ಮನವರ ಮೂಲ ವಿಗ್ರಹಕ್ಕೆ ಕುಂಭಾಭಿಷೇಕ, ಮಹಾಮಂಗಳಾರತಿ ಹಾಗೂ ನೈವೇದ್ಯ ಪೂಜಾ ಕಾರ್ಯಕ್ರಮಗಳು ನಡೆದವು. ಮಧ್ಯಾಹ್ನ 1 ಗಂಟೆಗೆ ಸರಿಯಾಗಿ ದೇಗುಲಕ್ಕೆ ಆಗಮಿಸಿದ ಎಲ್ಲಾ ಭಕ್ತಾಧಿಗಳಿಗೂ ಅನ್ನದಾನ ಏರ್ಪಡಿಸಲಾಗಿತ್ತು. ರಾತ್ರಿ 7 ಗಂಟೆಗೆ ಶ್ರೀ ಶಾರದ ಕಲಾತಂಡದ ವತಿಯಿಂದ ದಾನ ಭಕ್ತಿ ಸುಧೆಯನ್ನು ಏರ್ಪಡಿಸಲಾಗಿತ್ತು.

# ಬಂಜಾರ ಭಾಷೆ ಶೀಘ್ರ ಅಧಿಕೃತವಾಗಲಿದೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಆಲೂರು: ಎಲ್ಲರೂ ಸಮಾನತೆಯಿಂದ ಬದುಕಬೇಕು. ಹೆಣ್ಣು ಮಕ್ಕಳನ್ನು ಸೋದರಿಯರಂತೆ ಕಾಣಬೇಕು ಎಂದು ಸಾರಿದವರು ಸೇವಲಾಲರು ಎಂದು ತಹಸೀಲ್ದಾರ್ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ತಿಳಿಸಿದರು.

ಪಟ್ಟಣದ ಮಿನಿ ವಿದಾನಸೌಧ ಸಭಾಂಗಣದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಏರ್ಪಡಿಸಲಾಗಿದ್ದ ಸಂತ ಸೇವಾಲಾಲ್ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ರಾಷ್ಟ್ರೀಯ ಬಂಜಾರ ಸೇವಾ ಸಂಘದ ಜಿಲ್ಲಾಧ್ಯಕ್ಷ ಸೋಮನಾಯಕ್ ಮಾತನಾಡಿ, ಕರಾವಳಿ ಪ್ರದೇಶಗಳಲ್ಲಿ ಹಡಗು ಮೂಲಕ ಬರುತ್ತಿದ್ದ ಅಡುಗೆಗೆ ಬಳಸುವ ಉಪ್ಪನ್ನು ವ್ಯಾಪಾರ ಮಾಡುವ ಮೂಲಕ ದೇಶ, ಪ್ರಪಂಚದ ಗಮನ ಸೆಳೆದವರು ಬಂಜಾರರು.

ಸಮುದ್ರ ತೀರ ಪ್ರದೇಶದಿಂದ ಪಡೆದ ಉಪ್ಪನ್ನು ಮಾರಾಟ ಮಾಡಲು ಸುಮಾರು 25 ಸಾವಿರ ಎತ್ತಿನ ಬಂಡಿಗಳ ಮೂಲಕ ಘಟ್ಟಗಳ ಪ್ರದೇಶದಲ್ಲಿ ಮೊದಲು ದಾರಿ ಮಾಡಿಕೊಂಡವರು ಯಾವ ಇಂಜಿನಿಯರ್ ಅಲ್ಲ. ಅವರು ಬಂಜಾರರು.

ದೇಶದಲ್ಲಿ 12-13 ಕೋಟಿ ಬಂಜಾರ ಸಮುದಾಯದವರಿದ್ದಾರೆ. ಇಂದಿಗೂ ಬಂಜಾರರು ತಮ್ಮ ದೇವಾಲಯಗಳಲ್ಲಿ ಸಂತ ಸೇವಾಲಾಲರ ಭಾವಚಿತ್ರ ಹೊರತುಪಡಿಸಿದಂತೆ, ಬೇರೆ ಯಾವುದೆ ದೇವರ ಫೋಟೋ ಇಟ್ಟು ಪೂಜಿಸುವುದಿಲ್ಲ. ಹೈದರಾಬಾದ್ ನಿಜಾಮ ಬಂದ ನಂತರ, ಬಂಜಾರರು ಸ್ಥಳೀಯ ಬ್ರಿಟಿಷರಿಗೆ ಮದುಗುಂಡು ಕೊಡುತ್ತಾರೆ ಎಂಬ ಮೂಲ ಉದ್ದೇಶದಿಂದ, ಬಂಜಾರರ ಮೇಲೆ ಕ್ರಿಮಿನಲ್ ಟ್ರಿಬ್ಯುನಲ್ ಆಕ್ಟ್ ಜಾರಿ ತಂದರು. ಆ ಸಂದರ್ಭದಲ್ಲಿ ಜೀವ ಉಳಿಸಿಕೊಳ್ಳುವ ಉದ್ದೇಶದಿಂದ ಅಲ್ಲಲ್ಲಿ ತಂಡ ತಂಡವಾಗಿ ನೆಲೆಯೂರಿದರು. ಆ ತಂಡಗಳೆ ಈಗ ತಾಂಡಗಳಾಗಿವೆ. ಈ ಕಾರಣದಿಂದ ಅತಿ ದೊಡ್ಡ ಶ್ರೀಮಂತರಾಗಿದ್ದ ಬಂಜಾರರು ಇಂದು ಪ.ಜಾತಿ/ವರ್ಗಕ್ಕೆ ಸೇರಿ ಹೋಗಿದ್ದಾರೆ.

ರಾಜ್ಯ ಸರ್ಕಾರ ಬಂಜಾರ ಭಾಷೆಯನ್ನು ಎಂಟನೇ ಪರಿಚ್ಛೇದದಲ್ಲಿ ಸೇರಿಸಲು ಪ್ರಯತ್ನ ಮಾಡುತ್ತಿದೆ. ಮುಂದಿನ ದಿನಗಳಲ್ಲಿ ಬಂಜಾರ ಭಾಷೆ ಅಧಿಕೃತವಾಗಲಿದೆ.

ತಾಲ್ಲೂಕು ಅಧ್ಯಕ್ಷ ಜೆ. ರವಿನಾಯಕ್ ಮಾತನಾಡಿ, ಬಂಜಾರರು ಅಂಧಶ್ರದ್ಧೆ ಕೈಬಿಡಿ, ವೈಜ್ಞಾನಿಕ ಮನೋಭಾವನೆ ಬೆಳೆಸಿಕೊಳ್ಳಿ, ಶ್ರಮ ಮತ್ತು ಸ್ವಾಭೀಮಾನಕ್ಕೆ ಹೆಚ್ಚು ಬೆಲೆ ಕೊಡಬೇಕು. ಪರಿಸರ ಕಾಪಾಡುವುದರೊಂದಿಗೆ ಸಹಜೀವನ ನಡೆಸಬೇಕು ಎಂದು ಸಾರಿದವರು ಸೇವಾಲಾಲರು. ಬಂಜಾರರು ದೀಪಾವಳಿ ಹಬ್ಬವನ್ನು ವರ್ಣರಂಜಿತವಾಗಿ ಸಂಭ್ರಮಿಸುತ್ತಾರೆ ಎಂದರು. ಸಮಾರಂಭದಲ್ಲಿ ಹಾಸನ ತಾಲ್ಲೂಕು ಘಟಕ ಅಧ್ಯಕ್ಷ ಸುರೇಶ್ ಕುಮಾರ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸಿದ್ದೇಶ್, ಎ.ಡಿ.ಎಲ್.ಆರ್. ರವಿಶಂಕರ್, ತಾ.ಪಂ. ವ್ಯವಸ್ಥಾಪಕ ಕೇಶವಮೂರ್ತಿ ಉಪಸ್ಥಿತರಿದ್ದರು.

# ಮಾ.14ರ ವರೆಗೆ ರಾಷ್ಟ್ರೀಯ ಲೋಕ ಅದಾಲತ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜನವರಿ 1 ರಿಂದ 90 ದಿನಗಳವರೆಗೂ ಮಧ್ಯಸ್ಥಿಕೆಯ ಕುರಿತು ವಿಶೇಷ ಅಭಿಯಾನ ನಡೆಯುತ್ತಿದೆ. ಕಕ್ಷಿದಾರರು ನ್ಯಾಯಾಲಯಗಳಲ್ಲಿ ಬಾಕಿ ಉಳಿದಿರುವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಬಗೆ ಹರಿಸಿಕೊಳ್ಳುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹೇಮಾವತಿ ತಿಳಿಸಿದರು.

ಸುದ್ದಿಗಾರರಿಗೆ ಮಾಹಿತಿ ನೀಡಿದ ಅವರು, ರಾಜಿ ಸಂಧಾನವು ಶೀಘ್ರ ನ್ಯಾಯದಾನ ವ್ಯವಸ್ಥೆಯ ಅವಿಭಾಜ್ಯ ಅಂಗವಾಗಿದೆ. ನ್ಯಾಯಾಲಯಗಳಲ್ಲಿ ಸೌಹಾರ್ದಯುತವಾಗಿ ನಡೆಯಲಿದ್ದು ಕಕ್ಷಿದಾರರು ಜನತಾ ನ್ಯಾಯಾಲಯದ ಸದ್ಬಳಕೆ ಮಾಡಿಕೊಳ್ಳಬೇಕು. ಸಿವಿಲ್ ಪ್ರಕರಣ, ಚೆಕ್ ಅಮಾನ್ಯ ಪ್ರಕರಣಗಳು, ಮೋಟಾರ್ ವಾಹನ ಪರಿಹಾರ ಪ್ರಕರಣಗಳು, ಕೌಟುಂಬಿಕ ಪ್ರಕರಣ, ವಿಚ್ಛೇದನ ಪ್ರಕರಣಗಳನ್ನು ಮಧ್ಯಸ್ಥಿಕೆಯ ಮೂಲಕ ಬಗೆಹರಿಸಿಕೊಳ್ಳಲು ಅವಕಾಶವಿದ್ದು ಇದರ ಸದುಪಯೋಗವನ್ನು ಪಕ್ಷಗಾರರು ಪಡೆಯಬಹುದಾಗಿರುತ್ತದೆ ಎಂದು ಹೇಳಿದರು.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಅನ್ವಯ ಮಾ.14ರ ವರೆಗೆ ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಈ ಲೋಕ ಅದಾಲತ್‌ನಲ್ಲಿ ನ್ಯಾಯಾಲಯದಲ್ಲಿ ಬಾಕಿ ಇರುವ ಎಲ್ಲಾ ವಿಧದ ಸಿವಿಲ್ ವ್ಯಾಜ್ಯಗಳು, ಬಗೆಹರಿಸಬಹುದಾದ ಕ್ರಿಮಿನಲ್ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣ, ಮೋಟಾರ್ ವಾಹನ ಪರಿಹಾರ ಪ್ರಕರಣಗಳು, ಕಂದಾಯ ಪ್ರಕರಣಗಳು, ಜನನ ನೋಂದಣಿ ಪ್ರಕರಣಗಳು, ಜೀವನಾಂಶ ಪ್ರಕರಣಗಳು ಸೇರಿ ಇನ್ನಿತರೆ ಲಘು ಕ್ರಿಮಿನಲ್, ಮನೆಗಂದಾಯ ಮತ್ತು ನೀರಿನ ಕರವಸೂಲಿ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಲು ಅವಕಾಶವಿದೆ ಎಂದರು.

ಕಕ್ಷಿದಾರರು ವಕೀಲರ ಮೂಲಕ ಅಥವಾ ಖುದ್ದಾಗಿ ರಾಜಿ ಸಂಧಾನದ ಮೂಲಕ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದು. ಇದರಿಂದ ಸಮಯದ ಉಳಿತಾಯ, ಶೀಘ್ರ ನ್ಯಾಯದಾನ, ಸೌಹಾರ್ದಿತ ಬಾಂಧವ್ಯ ವೃದ್ಧಿಸಲಿದ್ದು ಕಕ್ಷಿದಾರರು ರಾಷ್ಟ್ರೀಯ ಲೋಕ್ ಅದಾಲತ್ ನ ಸದುಪಯೋಗವನ್ನು ಪಡೆಯಬಹುದಾಗಿದೆ ಎಂದರು.

# ಇತಿಹಾಸದಲ್ಲಿ ಈ ದಿನ

## ಫೆಬ್ರವರಿ-18

1930: ಅಮೆರಿಕದ ಖಗೋಳಶಾಸ್ತ್ರಜ್ಞ ಕ್ಲೈಡ್ ಟಾಂಬಾ ಪ್ಲೂಟೋಗ್ರಹವನ್ನು ಕಂಡುಹಿಡಿದರು.

2001: ಭಾರತದ ಖ್ಯಾತ ಕ್ರಿಕೆಟಿಗ ಅನಿಲ್ ಕುಂಬ್ಳೆ ಟೆಸ್ಟ್ ಕ್ರಿಕೆಟ್‌ನಲ್ಲಿ 500 ವಿಕೆಟ್‌ಗಳ ಸಾಧನೆ ಮಾಡಿದರು.

### ಜನನ

1898: ಇಟಲಿಯ ಕಾರು ತಯಾರಿಕಾ ದಿಗ್ಗಜ ಎನ್ಜೋ ಫೆರಾರಿ

1933: ಜಪಾನಿನ ಗಾಯಕಿ ಮತ್ತು ಕಲಾವಿದೆ ಯೋಕೋ ಓನೋ


### ಮರಣ

1564: ಪ್ರಸಿದ್ಧ ಚಿತ್ರಕಾರ ಮತ್ತು ಶಿಲ್ಪಿ ಮೈಕೆಲ್ಯಾಂಜೆಲೋ

1967: ಅಣು ವಿಜ್ಞಾನಿ ಜೆ. ರಾಬರ್ಟ್ ಒಪೆನ್‌ಹೈಮರ್

# ಸ್ಪರ್ಧಾತ್ಮಕ ಪರೀಕ್ಷೆಗೆ ನಿರಂತರ ಓದು ಅತ್ಯವಶ್ಯಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**




ಚನ್ನರಾಯಪಟ್ಟಣ: ಜ್ಞಾನವನ್ನು ಹೆಚ್ಚಿಸುವ ಗುಣಮಟ್ಟದ ಪುಸ್ತಕಗಳನ್ನು ಓದುವ ಮೂಲಕ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳಿಸಲು ಪ್ರಯತ್ನಿಸಬೇಕು ಎಂದು ಅಂಚೆ ಚೀಟಿ ಮತ್ತು ನಾಣ್ಯಗಳ ಸಂಗ್ರಹಕಾರ ಹೆಚ್.ಕೆ. ಸತೀಶ್ ಸಲಹೆ ನೀಡಿದರು.

ತಾಲೂಕಿನ ಹಿರೀಸಾವೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಮತ್ತು ಕನ್ನಡ ಸಾಹಿತ್ಯ ಪರಿಷತ್ ಹೋಬಳಿ ಘಟಕದ ಸಹಯೋಗದಲ್ಲಿ ಏರ್ಪಡಿಸಿದ್ದ ಅಂಚೆ ಚೀಟಿ ಮತ್ತು ನಾಣ್ಯಗಳ 150ನೇ ಪ್ರದರ್ಶನದಲ್ಲಿ ಅವರು ಮಾತನಾಡಿದರು.

ಗುಣಮಟ್ಟದ(ಬ್ರಾಂಡೆಡ್) ಬಟ್ಟೆ ಧರಿಸಬೇಕು ಎನ್ನುವುದು ಮುಖ್ಯವಲ್ಲ. ಜೀವನದ ಯಶಸ್ಸಿಗೆ ಅಗತ್ಯ ಇರುವ ಉತ್ತಮ ಪುಸ್ತಕಗಳನ್ನು ಹೊಂದಬೇಕು. ವಿದ್ಯಾರ್ಥಿಗಳು ಆಧುನಿಕ ಜಗತ್ತಿನಲ್ಲಿ ತಂತ್ರಜ್ಞಾನದ ಜೊತೆಗೆ ಇತಿಹಾಸವನ್ನು ತಿಳಿದರೆ ಉತ್ತಮ ಉದ್ಯೋಗವನ್ನು ಪಡೆಯಲ ಸಾಧ್ಯ ಎಂದರು.

ಕಸಾಪ ಹೋಬಳಿ ಘಟಕದ ಅಧ್ಯಕ್ಷ ಹೆಚ್.ಎ. ಪ್ರಮೋದ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಪದವಿ ಹಂತದಲ್ಲಿ ಸಮಯ ಎನ್ನುವುದು ಬಹಳ ಮುಖ್ಯ, ಈ ಹಂತದಲ್ಲಿ ಯುವಜನತೆ ಮುಂದಿನ ಭವಿಷ್ಯಕ್ಕೆ ಬೇಕಾದ ಸರಿಯಾದ ಮಾರ್ಗದರ್ಶನವನ್ನು ತಜ್ಞರಿಂದ ಪಡೆಯುವುದು ಒಳಿತು ಎಂದು ಸಲಹೆ ನೀಡಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248